ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಮೊದಲನೇ ಅಧಿವೇಶನ
(2ನೇ ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 11ನೇ ಜುಲೈ, 2018

(ಸಮಯ: ಬೆಳಿಗ್ಗೆ 10.30 ಗಂಟೆಗೆ)

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೇ ಪಟ್ಟಿ

2. ವಿತ್ತೀಯ ಕಾರ್ಯಕಲಾಪಗಳು

2018–19ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಹಾಗೂ ಈ ಕೆಳಕಂಡ ಅನುದಾನಗಳ ಬೇಡಿಕೆಗಳ ಮೇಲೆ ಮುಂದುವರೆದ ಚರ್ಚೆ:

ಬೇಡಿಕೆ ಸಂಖ್ಯೆ	**ಬೇಡಿಕೆಯ ಹೆಸರು**
03	ಆರ್ಥಿಕ
04	ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
06	ಮೂಲಭೂತ ಸೌಕರ್ಯ ಅಭಿವೃದ್ಧಿ
24	ಇಂಧನ
26	ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ
05	ಒಳಾಡಳಿತ ಮತ್ತು ಸಾರಿಗೆ
20	ಲೋಕೋಪಯೋಗಿ

14	ಕಂದಾಯ
09	ಸಹಕಾರ
21	ಜಲ ಸಂಪನ್ಮೂಲ
17	ಶಿಕ್ಷಣ
15	ಮಾಹಿತಿ ತಂತ್ರಜ್ಞಾನ
18	ವಾಣಿಜ್ಯ ಮತ್ತು ಕೈಗಾರಿಕೆ
07	ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್
27	ಕಾನೂನು
28	ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
01	ಕೃಷಿ ಮತ್ತು ತೋಟಗಾರಿಕೆ
02	ಪಶುಸಂಗೋಪನೆ ಮತ್ತು ಮೀನುಗಾರಿಕೆ
10	ಸಮಾಜ ಕಲ್ಯಾಣ
16	ವಸತಿ
19	ನಗರಾಭಿವೃದ್ಧಿ
12	ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು
13	ಆಹಾರ ಮತ್ತು ನಾಗರೀಕ ಸರಬರಾಜು
22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ
23	ಕಾರ್ಮಿಕ ಮತ್ತು ಕೌಶಲ್ಯ ಅಭಿವೃದ್ಧಿ
08	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
11	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
25	ಕನ್ನಡ ಮತ್ತು ಸಂಸ್ಕೃತಿ

3. ಗಮನ ಸೆಳೆಯುವ ಸೂಚನೆಗಳು

1) **ಡಾ. ಎಸ್. ಶಿವರಾಜ್ ಪಾಟೀಲ್** ಅವರು ರಾಯಚೂರು ವಿಧಾನಸಭಾ ಕ್ಷೇತ್ರದ ಹಳ್ಳಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್, ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

2) **ಶ್ರೀ ಹೆಚ್. ಹಾಲಪ್ಪ** ಅವರು ಶಿವಮೊಗ್ಗ ಜಿಲ್ಲೆ ಸಾಗರ ತಾಲ್ಲೂಕಿನ ಹೊಳೆಬಾಗಿಲಿನಲ್ಲಿ ಪ್ರಸಕ್ತ 4 ಲಾಂಚ್‌ಗಳನ್ನು ಒದಗಿಸಿದ್ದು, ಅದಕ್ಕೆ ಅಗತ್ಯ ಅನುದಾನ ನೀಡದಿರುವುದರಿಂದ, ಡೀಸಲ್ ವೆಚ್ಚದ ಕೊರತೆ ಮತ್ತು ಸಿಬ್ಬಂದಿಗಳಿಗೆ ವೇತನ ನೀಡಲು ಅನಾನುಕೂಲ ಆಗುತ್ತಿರುವ ಬಗ್ಗೆ ಮಾನ್ಯ ಪೌರಾಡಳಿತ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

3) **ಡಾ: ಹೆಚ್.ಡಿ. ರಂಗನಾಥ್** ಅವರು ರಾಜ್ಯದಲ್ಲಿ ಆರೋಗ್ಯ ಕರ್ನಾಟಕ ಯೋಜನೆ ಜಾರಿಗೆ ತಂದಿದ್ದು, ಕುಣಿಗಲ್ ತಾಲ್ಲೂಕಿನಲ್ಲಿ ಎಲ್ಲಾ ನಾಗರಿಕರನ್ನು ವಿಮೆ ವ್ಯಾಪ್ತಿಗೊಳಪಡಿಸಿ ಆರೋಗ್ಯ ರಕ್ಷಣೆಯನ್ನು ನೀಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

4) **ಶ್ರೀ ಎನ್.ಎ. ಹ್ಯಾರಿಸ್** ಅವರು ರಾಜ್ಯದಲ್ಲಿ ಅಬಕಾರಿ ಇಲಾಖೆ ಲೈಸೆನ್ಸ್‌ದಾರರಿಗೆ ಗರಿಷ್ಠ ಪ್ರಮಾಣದಲ್ಲಿ ಮದ್ಯಪಾನ ಮಾರಾಟ ಮಾಡಬೇಕೆಂಬ ಷರತ್ತು ವಿಧಿಸಿರುವುದನ್ನು ಹಿಂಪಡೆಯುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

5) **ಶ್ರೀ ಸಿ.ಎಸ್. ನಿರಂಜನ್ ಕುಮಾರ್** ಅವರು ಗುಂಡ್ಲುಪೇಟೆಯಲ್ಲಿ ಹೊಸದಾಗಿ ನಿರ್ಮಾಣಗೊಂಡು ಉದ್ಘಾಟನೆಯಾಗಿರುವ ಹೆರಿಗೆ ಆಸ್ಪತ್ರೆಗೆ ಕೂಡಲೇ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರನ್ನು ನೇಮಕ ಮಾಡುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

6) **ಶ್ರೀ ರಾಜಾ ವೆಂಕಟಪ್ಪ ನಾಯಕ** ಅವರು ಹೈದ್ರಾಬಾದ್ ಕರ್ನಾಟಕ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ರಾಯಚೂರು ಜಿಲ್ಲೆಯಲ್ಲಿನ ಕಾರ್ಮಿಕರು, ಸಾರ್ವಜನಿಕರು ಹಾಗೂ ನಿರುದ್ಯೋಗಿಗಳು ಉದ್ಯೋಗವನ್ನು ಅರಸಿ ವಲಸೆ ಹೋಗುತ್ತಿರುವುದರಿಂದ, ಸ್ಥಳೀಯರಿಗೆ ಅನುಕೂಲವಾಗುವಂತೆ ಸಣ್ಣ-ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಿ ಅವರ ಆರ್ಥಿಕ ಜೀವನಮಟ್ಟ ಸುಧಾರಿಸಲು ಅನುಕೂಲ ಮಾಡುವ ಬಗ್ಗೆ ಮಾನ್ಯ ಸಣ್ಣ ಕೈಗಾರಿಕೆ ಸಚಿವರ ಗಮನ ಸೆಳೆಯುವುದು.

7) **ಶ್ರೀ ಅರಗ ಜ್ಞಾನೇಂದ್ರ** ಅವರು ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ಮಂಜೂರಾಗಿರುವ ವಸತಿಗಳನ್ನು ನಿರ್ಮಿಸುವ ಸಂಬಂಧ ಬಿಲ್ ಪಡೆಯಲು ಇನ್ನಷ್ಟು ಸಮಯಾವಕಾಶ ನೀಡುವ ಬಗ್ಗೆ ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

ಎಸ್. ಮೂರ್ತಿ
ಕಾರ್ಯದರ್ಶಿ.

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm